# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1409 |
| 02. | ಮಾನ್ಯ ವಿಧಾನ ಸಭೆ ಸದಸ್ಯರ ಹೆಸರು | : | ಶ್ರೀ ಕೆ.ಪ್ರತಾಪ ಸಿಂಹ ನಾಯಕ್<br>(ವಿಧಾನ ಸಭಾ ಕ್ಷೇತ್ರ) |
| 03. | ಉತ್ತರಿಸುವ ದಿನಾಂಕ | : | 20/03/2025 |
| 04. | ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಹಲವಾರು ವಿದೇಶಿಗರು ಡ್ರಗ್ಸ್ ಪೆಡ್ಲರ್ಸ್ ಆಗಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td rowspan="2">ಬಂದಿದೆ.<br>ರಾಜ್ಯದಲ್ಲಿ ಕೆಲವು ವಿದೇಶಿಯರು ಡ್ರಗ್ಸ್ ಪೆಡ್ಲರ್ಸ್ ಆಗಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವ ಕುರಿತಂತೆ ಕಳೆದ ಎರಡು ವರ್ಷಗಳಲ್ಲಿ ದಾಖಲಿಸಿರುವ ಪ್ರಕರಣಗಳು ಮತ್ತು ಬಂಧಿಸಿರುವ ವಿದೇಶಿ ಆರೋಪಿತರ ವಿವರಗಳು ಈ ಕೆಳಕಂಡಂತಿದೆ:-
<table>
<tr><th rowspan="2">ವರ್ಷ</th><th colspan="3">ವಿದೇಶಿಯರ ವಿರುದ್ಧ ದಾಖಲಿಸಿರುವ ಡ್ರಗ್ಸ್ ಪ್ರಕರಣಗಳ ಸಂಖ್ಯೆ</th></tr>
<tr><th>ಡ್ರಗ್ಸ್ ಪೆಡ್ಲರ್ಸ್</th><th>ಸೇವನೆ</th><th>ಮಾರಾಟ</th></tr>
<tr><td>2023</td><td>83</td><td>5</td><td>77</td></tr>
<tr><td>2024</td><td>45</td><td>-</td><td>45</td></tr>
<tr><td>2025 (ಫೆಬ್ರವರಿ ಅಂತ್ಯಕ್ಕೆ)</td><td>6</td><td>-</td><td>6</td></tr>
</table>
<table>
<tr><th rowspan="2">ವರ್ಷ</th><th colspan="3">ಬಂಧಿಸಿರುವ ವಿದೇಶಿ ಆರೋಪಿತರ ಸಂಖ್ಯೆ</th></tr>
<tr><th>ಡ್ರಗ್ಸ್ ಪೆಡ್ಲರ್ಸ್</th><th>ಸೇವನೆ</th><th>ಮಾರಾಟ</th></tr>
<tr><td>2023</td><td>101</td><td>8</td><td>96</td></tr>
<tr><td>2024</td><td>63</td><td>-</td><td>63</td></tr>
<tr><td>2025 (ಫೆಬ್ರವರಿ ಅಂತ್ಯಕ್ಕೆ)</td><td>8</td><td>-</td><td>8</td></tr>
</table>
</td></tr>
<tr><td>ಆ)</td><td>ಬಂದಿದ್ದಲ್ಲಿ ಕಳೆದ ಎರಡು ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿರುವ ಎಷ್ಟು ಜನ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಪ್ರಕರಣಗಳು ದಾಖಲಾಗಿವೆ :(ವಿವರ ನೀಡುವುದು)</td></tr>
<tr><td>ಇ)</td><td>ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಿರುವ ಈ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು:</td><td>ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಿರುವ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಸರ್ಕಾರವು ಈ ಕೆಳಕಂಡಂತೆ ಕ್ರಮವಹಿಸಿದೆ:-<br>➢ ಪದೇ ಪದೇ ಡ್ರಗ್ಸ್ ಅಕ್ರಮಗಳಲ್ಲಿ ಭಾಗಿಯಾಗಿದ್ದ 5 ಜನ ವಿದೇಶಿಯರನ್ನು PIT-NDPS (The Prevention of Illicit Traffic in Narcotic Drugs and Psychotropic Substances Act), 1988ರ ಅಡಿಯಲ್ಲಿ 1 ವರ್ಷಗಳವರೆಗೆ ಬಂಧನದಲ್ಲಿ ಇಡಲಾಗಿದೆ.<br>➢ ಅಕ್ರಮವಾಗಿ ನೆಲಸಿರುವ ವಿದೇಶಿಯರನ್ನು ಪತ್ತೆ ಮಾಡಿ ಎಫ್.ಆರ್.ಓ ರವರ ಮೂಲಕ ಅವರ ದೇಶಗಳಿಗೆ ಹಿಂದಿರುಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
</table>

| | | |
|---|---|---|
| | | ➢ ಡ್ರಗ್ಸ್ ಮಾರಾಟ ಮಾಡುವ ವಿದೇಶಿಯರ ಮಾಹಿತಿಯನ್ನು ಸಾರ್ವಜನಿಕರು ಟೋಲ್ ಫ್ರೀ ಸಂಖ್ಯೆ: 1908 ದೂರವಾಣಿ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>➢ ಪೊಲೀಸ್ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ವಿದೇಶಿಯರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದೇಶಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ.<br>➢ ಶಾಲಾ ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಅಲ್ಲಿಯೇ ಸಾರ್ವಜನಿಕವಾಗಿ ಮಾದಕ ವಸ್ತು ಸೇವನೆ ಮಾಡುವ ವಿದೇಶಿಯರ ವಿರುದ್ಧ ದಂಡವನ್ನು ವಿಧಿಸುವುದರ ಮೂಲಕ ಸಾರ್ವಜನಿಕ ಸ್ಥಳಗಳಲ್ಲಿ ಸೇವನೆ ಮಾಡುವುದನ್ನು ತಡೆಗಟ್ಟುವುದು ಮತ್ತು ಜಾಗೃತಿ ಮೂಡಿಸುವುದರ ಬಗ್ಗೆ ಹೆಚ್ಚಿನ ಗಮನ ಹರಿಸಲಾಗಿದೆ.<br>➢ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಮತ್ತು ಇತರೆ ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.<br>➢ ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಭಾಗಿಯಾಗಿರುವ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಆಗಿಂದಾಗ್ಗೆ ಆಯಾ ಕ್ಷೇತ್ರ ವ್ಯಾಪ್ತಿಯ ಪೊಲೀಸ್ |

| | | |
|---|---|---|
| | | ಠಾಣೆಗಳಿಂದ ಪಡೆಯಲಾಗುತ್ತಿದೆ.<br>➢ ವಿದೇಶಿಯರಿಂದ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.<br>➢ ವಿದೇಶಿಯರು ಹೆಚ್ಚಾಗಿ ಸೇರುವ ಬಾರ್ ರೆಸ್ಟೋರೆಂಟ್, ಪಬ್, ಡ್ಯಾನ್ಸ್ ಬಾರ್ ಮುಂತಾದ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ಪ್ರಕಾರ ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಸಾಕ್ಷ್ಯ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.<br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ-ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ವಿದೇಶಿ ವ್ಯಕ್ತಿಗಳ ಮಾಹಿತಿ ಸಂಗ್ರಹಿಸಲಾಗುತ್ತಿದೆ. |
| ಈ) | ಕಾಲೇಜು ವಿದ್ಯಾರ್ಥಿಗಳನ್ನೇ ಗುರಿಯಾಗಿ ಸಿಕೊಂಡು ಅವರನ್ನು ಡ್ರಗ್ಸ್ ಜಾಲಕ್ಕೆ ಸೆಳೆಯುತ್ತಿರುವ ಹಲವಾರು ಪ್ರಕರಣ ಗಳಲ್ಲಿ ಬಹು ಮುಖ್ಯವಾಗಿ ಈ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ಕೈವಾಡ ಕಂಡು ಬಂದಿದ್ದು, ಸರ್ಕಾರ ಈಗಲಾದರೂ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಅತ್ಯಂತ ಕಠಿಣ ಕ್ರಮಗಳನ್ನು ಕೈಗೊಂಡು ವ್ಯಾಪಕವಾಗಿ ಹರಡಿರುವ ಡ್ರಗ್ಸ್ ಜಾಲಕ್ಕೆ ಶಾಶ್ವತವಾಗಿ ಕಡಿವಾಣ ಹಾಕಲು ಅಗತ್ಯ ಹಾಗೂ ಸೂಕ್ತ ಕ್ರಮವಹಿಸುವುದೇ? | ಕಾಲೇಜು ವಿದ್ಯಾರ್ಥಿಗಳು ಹಾಗೂ ಹದಿ-ಹರೆಯದ ಯುವಕ-ಯುವತಿಯರಿಗೆ ಮಾದಕದ್ರವ್ಯ ಪದಾರ್ಥಗಳ ದುಶ್ಚಟಗಳಿಂದ ಆಗುವ ದುಷ್ಪ ಪರಿಣಾಮಗಳ ಬಗ್ಗೆ ಸತತವಾಗಿ ಜಾಗೃತಿ ಕಾರ್ಯಗಾರಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.<br><br>ಮಾದಕ ದ್ರವ್ಯ ಮತ್ತು ವಸ್ತುಗಳ ಸೇವನೆ ಮತ್ತು ಮಾರಾಟದಲ್ಲಿ ತೊಡಗಿರುವ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಎನ್.ಡಿ.ಪಿ.ಎಸ್ ಕಾಯ್ದೆ, 1985ರ ಅಡಿ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ. |

ಒಇ 16 ಪಿಎನ್‌ಡಿ 2025 (ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು.